# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ವಯೋಮಿತಿಯನ್ನು ನಿಗದಿಪಡಿಸುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಸಕಇ 190 ಬಿಎಂಎಸ್ 2001, ದಿನಾಂಕ:12.06.2001
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 636 ಬಿಎಂಎಸ್ 2015, ದಿನಾಂಕ:16.06.2015
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 230 ಬಿಎಂಎಸ್ 2022, ದಿನಾಂಕ:21.06.2022
4. ಆಯುಕ್ತರು,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕಕಡತ ಸಂಖ್ಯೆ: BCWD-12037/10/2022-BCWD-HOSTEL-BCWD

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ಮೆಟ್ರಿಕ್ ನಂತರದ ವಸತಿನಿಲಯಗಳ ವಿದ್ಯಾರ್ಥಿಗಳ ಪ್ರವೇಶಾತಿ ನಿಯಮಗಳನ್ನು ಪರಿಷ್ಕರಿಸಿದ್ದು, ಅರ್ಹತೆಗಳನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಿ ಆದೇಶಿಸಲಾಗಿರುತ್ತದೆ,

ಮೇಲೆ ಓದಲಾದ ಕ್ರಮ ಸಂಖ್ಯೆ(3) ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಅಹ್ವಾನಿಸಿ ವಿದ್ಯಾರ್ಥಿಗಳಲ್ಲಿ ಸಿ.ಇ.ಟಿ. ಕೌನ್ಸಲಿಂಗ್ ಮಾದರಿಯಲ್ಲಿ ಪ್ರವೇಶಾತಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4) ರ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕಕಡತದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಸುಮಾರು 15 ವರ್ಷದಿಂದ 47 ವರ್ಷದ ಅಭ್ಯರ್ಥಿಗಳು ದಾಖಲಾಗಿರುವುದು ಕಂಡುಬಂದಿರುತ್ತದೆ. ಸದರಿ ವಯೋಮಿತಿಯನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ 16 ರಿಂದ 26 ಕ್ಕೆ ನಿಗದಿಪಡಿಸುವುದು ಸೂಕ್ತವೆಂದು ಪರಿಗಣಿಸಿ, ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 417 ಬಿಎಂಎಸ್ 2022, ಬೆಂಗಳೂರು, ದಿನಾಂಕ:16-07-2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ **ವಯೋಮಿತಿಯನ್ನು 16 ರಿಂದ 26**ಕ್ಕೆ ನಿಗದಿಪಡಿಸಿ ಆದೇಶಿಸಿದೆ .

ಉಳಿದಂತೆ, ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಈ ಹಿಂದೆ ಹೊರಡಿಸಿರುವ ಎಲ್ಲಾ ಆದೇಶಗಳು/ಮಾರ್ಗಸೂಚಿಗಳು [illegible] ಅನ್ವಯಿಸುತ್ತವೆ.

ಈ ಆದೇಶವನ್ನು, ಮಾನ್ಯ ಸಚಿವರ ಅನುಮೋದನೆ ಹಾಗೂ ಇಲಾಖಾ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳ ಅನುಮೋದನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಾಹೀನ್ ಪರ್ವೀನ್ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು, (ಎ & ಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಆಯುಕ್ತರು,ಹಿಂವಕ ಇವರ ಮೂಲಕ
4. ಎಲ್ಲಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು- ಆಯುಕ್ತರು,ಹಿಂವಕ ಇವರ ಮೂಲಕ
5. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ:-</u>

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.